SC: 111/2021
PW:20 CW:27

ಕರ್ನಾಟಕ ಸರ್ಕಾರ (ಸಿ.ಆರ್.ಪಿ67)

| |
|---|
| ಹೇಳಿಕೆ ಹಾಳೆ<br>ಆರ್.ಪಿ. ಸಂಖ್ಯೆ 57<br>ನಮೂನೆ ಸಂಖ್ಯೆ 4<br>(ಸಿವಿಲ್) |

# 3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಬಳ್ಳಾಪುರ

## ಸತ್ರ ಪ್ರಕರಣ ಸಂಖ್ಯೆ: 111/2021

| | |
|---|---|
| PW | 20 |
| CW | 27 |

**ಸಾಕ್ಷಿಯನ್ನು ಕರೆಯಿಸಿ ಸತ್ಯ ಬೋಧನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ** 21.11.2024.

| | | |
|---|---|---|
| ಸಾಕ್ಷಿಯ ಹೆಸರು | : | ಮೂರ್ತಪ್ಪ |
| ತಂದೆಯ ಹೆಸರು | : | ನರಸಿಂಹಪ್ಪ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಬೊಮ್ಮಸಂದ್ರ |

**ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದ:**

1. ಮೃತ ವಿಶ್ವನಾಥ ಇವರ ಪರಿಚಯ ಇದ್ದು ಅವರು ನಮ್ಮ ಊರಿನವರಾಗಿರುತ್ತಾರೆ. ನನಗೆ ಚಾಸಾ-1, 2 ರವರ ಪರಿಚಯ ಇದ್ದು. ಉಳಿದ ಸಾಕ್ಷಿದಾರರ ಪರಿಚಯ ಇಲ್ಲ. ಈ ದಿನ ನ್ಯಾಯಾಲಯದ ಮುಂದೆ ಹಾಜರಿರುವ 2 ಮತ್ತು 4 ನೇ ಆರೋಪಿತರು ಹಾಗೂ ಈ ದಿನ ನ್ಯಾಯಾಲಯದ ಮುಂದೆ ವಿ ಸಿ ಮುಖಾಂತರ ಹಾಜರುಪಡಿಸಿದ 1 ಮತ್ತು 3 ನೇ ಆರೋಪಿತರ ಪರಿಚಯ ಇಲ್ಲ.

2. ಮೃತ ವಿಶ್ವನಾಥ ಇವರು ಶಿಕ್ಷಕರಾಗಿದ್ದರು. ವಿಶ್ವನಾಥ ಮೃತಪಟ್ಟು ಎಷ್ಟು ವರ್ಷ ಆಗಿರುತ್ತದೆ ಎಂದು ನನಗೆ ತಿಳಿದಿಲ್ಲ. ಮೃತ ವಿಶ್ವನಾಥ ಇವರು ತನ್ನ ಕೆಲಸಕ್ಕೆ ಯಾವ ರೀತಿ ಹೋಗುತ್ತಿದ್ದರು ಎಂದು ನನಗೆ ತಿಳಿದಿಲ್ಲ. ಅವರು ಹೇಗೆ ಮೃತಪಟ್ಟರು , ಅವರ ಸಾವಿಗೆ ಯಾರು ಕಾರಣ ಎಂದು ನನಗೆ ತಿಳಿದಿಲ್ಲ. ನಾನು ವಿಶ್ವನಾಥ ರವರ ಶವವನ್ನು ಆಸ್ಪತ್ರೆಯಲ್ಲಿ ನೋಡಿದ್ದು ಅವರಿಗೆ ಎಲ್ಲೆಲ್ಲಿ ಏಟಾಗಿತ್ತು ಎಂದು ನಾನು ನೋಡಿಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರ ವಿನಂತಿಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

3. ನಾನು ಈಗ ಓದಿ ಹೇಳಿದಂತೆ " ದಿನಾಂಕ 04.07.2021 ರಂದು

...........................................................................................................

...........................................................................................................

ತಿಳಿಯಬೇಕೆಂದು ಕೋರುತ್ತೇನೆ. " ಎಂದು ಈಗ ಓದಿ ಹೇಳಿದ ರೀತಿ ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಾಕ್ಷಿಯ ಹೇಳಿಕೆಯನ್ನು ನಿಪಿ 40 ಎಂದು ಗುರುತಿಸಲಾಯಿತು.

4. ನನಗೆ ಘಟನೆಯ ಬಗ್ಗೆ ಮಾಹಿತಿ ಇದ್ದು, ಆ ಬಗ್ಗೆ ನಾನು ನಿಪಿ 40 ರಂತೆ ಪೊಲೀಸರಿಗೆ ಹೇಳಿಕೆ ನೀಡಿದ್ದರೂ ಸಹ ಈಗ ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

SC: 111/2021
PW:20 CW:27

**ಪಾಟೀ ಸವಾಲುಃ ಆರೋಪಿತರಪರ ಶ್ರೀ ಎ ಸಿ ಡಿ ಮತ್ತು ಶ್ರೀ ಕೆ ಎಸ್ ಎನ್ ಹಾಗೂ ಶ್ರೀ ಜಿ**

**ಆರ್ ಹೆಚ್ ವಕೀಲರಿಂದಃ**

ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ದಿನಾಂಕ 21.11.2024 ರಂದು ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಿಸಲಾಯಿತು )**

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/–
**(ಎಸ್. ಶ್ರೀಧರ)**
ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಬಳ್ಳಾಪುರ.